ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.575/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಪಂಪಾಪತಿ** | | |
| **ತಂದೆಃಹೆಸರು** | **ನಾಗಪ್ಪ** | **ಪಿಡಬ್ಲ್ಯೂಃ** | **5** |
| **ವಯಸ್ಸು** | **45 ವರ್ಷ** | **ಸಿಡಬ್ಲ್ಯೂಃ** | **2** |
| **ಉದ್ಯೋಗಃ** | **ಮೇಸನ್ ಕೆಲಸ** | | |
| **ವಾಸ ಸ್ಥಳಃ** | **ಸೋಮಲಾಪುರ.** | | |

**ದಿನಾಂಕ 28-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ಈ ದಿನ ನ್ಯಾಯಾಲಯದಲ್ಲಿ 2 ರಿಂದ 4 ನೇ ಆರೋಪಿತರು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-2 ನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2 ಸಿ ಎಂದು ಗುರುತಿಸಲಾಯಿತು.

ನಾನು ಹುಸೇನಪ್ಪ ರವರ ಹೊಲದ ಹತ್ತಿರ ಹೋಗಿದ್ದೆ, ಆ ಕಾಲಕ್ಕೆ ಸಹಿ ಮಾಡಿದ್ದೆ. ನಿಪಿ-2 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಫೋಟೋಗಳನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿಃ 05.11.2022 ರಂದು ಸಂಜೆ .4 ರಿಂದ 5 ಗಂಟಯೆವರೆಗೆ ನಿಮ್ಮ & ಚಾಸಾ-3 ರವರ ಸಮಕ್ಷಮ ಘಟನಾ ಸ್ಥಳದಲ್ಲಿ ನಿಪಿ-2 ರಂತೆ ಸ್ಥಳ ಪಂಚನಾಮೆ ಮಾಡಿ, 1 ಕಟ್ಟಿಗೆ ಹಿಡಿಕೆಯನ್ನು ಮತ್ತು ಕಬ್ಬಿಣದ ಕುಡುಗೋಲನ್ನು ವಶಕ್ಕೆ ಪಡೆದಿದ್ದರು ಎಂದರೆ ಸರಿಯಲ್ಲ.

ನಿಪಿ-2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ ಗಳನ್ನು ತೋರಿಸಿದ್ದು ಸಾಕ್ಷಿಯು ನನಗೆ ಗೊತ್ತಿಲ್ಲ ನಾನು ನೋಡಿಲ್ಲ ಎಂದು ನುಡಿದಿರುತ್ತಾರೆ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.**